# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1134 (1360)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : K.I.A.D.B., ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

(ಅ) ಕಳೆದ 03 ವರ್ಷಗಳಲ್ಲಿ K.I.A.D.B. ವತಿಯಿಂದ ಕೈಗೊಂಡ ಕಾಮಗಾರಿಗಳು ಯಾವುವು ; ಯಾವ ಏಜೆನ್ಸಿಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ; (ಕಾಮಗಾರಿವಾರು/ಹಾಗೂ ಗುತ್ತಿಗೆದಾರರವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳನ್ನು ಅನುಷ್ಠಾನ ಮಾಡುವಾಗ KTTP ನಿಯಮ ಪಾಲನೆಯಾಗಿದೆಯೇ ; (ಕಾಮಗಾರಿವಾರು ವಿವರ ನೀಡುವುದು)

(ಇ) ಕೆಲವು ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ಕಾಮಗಾರಿವಾರು ವಿವರ ನೀಡುವುದು)

(ಈ) ಕೆಲವು ಕಾಮಗಾರಿಗಳು ಅಪೂರ್ಣವಾಗಿದ್ದು, ಇದಕ್ಕೆ ಕಾರಣಗಳೇನು; ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಗುತ್ತಿಗೆದಾರರಿಗೆ ಹಣ ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮವೇನು ; (ಕಾಮಗಾರಿವಾರು ವಿವರ ನೀಡುವುದು)

(ಉ) ಕೆಲವು ಕಾಮಗಾರಿಗಳು ನಕಲಿ ಆಗುವುದು ಸರ್ಕಾರದ ಬಳಿ ಮಾಹಿತಿ ಇದೆಯೇ ; ತಪಿತಸ್ಥರ ವಿರುದ್ಧ ತೆಗೆದುಕೊಂಡ ಕ್ರಮವೇನು;

(ಊ) ಟೆಂಡರ್ ಕಾಮಗಾರಿ ನೀಡುವಾಗ ಕೆಲವು ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಅರ್ಹತೆಗಳನ್ನು ನಿಗದಿಪಡಿಸಿ ಅವ್ಯವಹಾರ

ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು ?